## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-198ನೇ ಸಾಲಿನಲ್ಲಿ 2017-18ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ರಾಜ್ಯ ಸಹಾಯಧನವನ್ನು ಅನಿಲ ಯೋಜನೆಯಡಿ ಬಿಡುಗಡೆ ಮಾಡುವ ಕುರಿತು.

### ಪ್ರಸ್ತಾವನೆ :

2018-19ನೇ ಸಾಲಿನ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ **2810-01-198-1-01-300**ರಡಿ **ರೂ.1.00**ಲಕ್ಷಗಳನ್ನು 2017-18ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಜೈವಾನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಬಾಕಿ ಪಾವತಿಗಾಗಿ ಅನಿಲ ಯೋಜನೆಯಡಿ ನಿಗದಿಪಡಿಸಿದೆ.

ಇದರನ್ವಯ **2018-19ನೇ ಸಾಲಿನಲ್ಲಿ 2017-18ನೇ ಸಾಲಿಗೆ ಸಂಬಂಧಿಸಿದಂತೆ ನಿರ್ಮಿಸಲಾದ ಅನಿಲ ಸ್ಥಾವರಗಳ ಬಾಕಿ ಪಾವತಿಗಾಗಿ ರೂ.1.00ಲಕ್ಷಗಳನ್ನು ರಾಜ್ಯ ಸಹಾಯಧನವನ್ನಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ರವರಿಗೆ ಲೆಕ್ಕ ಶೀರ್ಷಿಕೆ 2810-01-198-1-01-300**ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/16/ಜೈಅಯೋ/2018, ಬೆಂಗಳೂರು, ದಿನಾಂಕ 23.10.2018.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2018-19ನೇ ಸಾಲಿನಲ್ಲಿ 2017-18ನೇ ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ರಾಜ್ಯ ಸಹಾಯಧನ ಪಾವತಿಸಲು **ರೂ.1.00**ಲಕ್ಷ (ಒಂದು ಲಕ್ಷದ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಹಾಗೂ ವ್ಯಪಗತ ಮಾಡತಕ್ಕದಲ್ಲ. ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸಿ ಬಿಡುಗಡೆ ಮಾಡತಕ್ಕದ್ದು.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 2810-01-198-1-01-300ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 04 ಟಿಎಫ್‌ಪಿ 2018, ದಿನಾಂಕ 24.07.2018ರ ಆದೇಶದನ್ವಯ ಆಡಳಿತ ಇಲಾಖಾ ಮುಖ್ಯಸ್ಥರಿಗೆ ಆರ್ಥಿಕ ವಿತ್ತಾಧಿಕಾರ ಪ್ರತ್ಯಾಯೋಜಿಸಿರುವ ಮೇರೆಗೆ ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 318 ಪಿಬಿಎಸ್ 2018, ದಿನಾಂಕ 06.10.2018ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
3. ಜಿಲ್ಲಾ ಖಜಾನಾಧಿಕಾರಿಗಳು, ಉತ್ತರ ಕನ್ನಡ.
4. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರದಾನ ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.